# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **860** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಸುನೀಲ್ ವಲ್ಯಾಪುರ್<br>(ವಿಧಾನಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **22/02/2024** |
| **ಉತ್ತರಿಸುವವರು** | **ಮಾನ್ಯ ಕಾರ್ಮಿಕ ಸಚಿವರು** |

<table>
<tr><th>ಕ್ರ.<br>ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲಬುರಗಿ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯಿಂದ ಎಷ್ಟು ಕಾರ್ಮಿಕರಿಗೆ ಗುರುತಿನ ಚೀಟಿ ನೀಡಲಾಗಿದೆ; (ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಗುರುತಿನ ಚೀಟಿವಾರು ವಿವಿರ ನೀಡುವುದು);</td><td>ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ, ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಫಲಾನುಭವಿಗಳಾಗಿ ನೋಂದಾಯಿತರಾದ ಕಾರ್ಮಿಕರಿಗೆ ಗುರುತಿನ ಚೀಟಿ ನೀಡಲಾಗಿದ್ದು, ವಿವರ ಈ ಕೆಳಕಂಡಂತಿದೆ.<br><br>ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:<br>ಈ ಮಂಡಳಿಯಲ್ಲಿ ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ ಒಟ್ಟು 3,77,670 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಫಲಾನುಭವಿಗಳಾಗಿ ನೊಂದಣಿಯಾಗಿರುತ್ತಾರೆ. ಅವರಿಗೆ ಗುರುತಿನ ಚೀಟಿ ನೀಡಲಾಗಿರುತ್ತದೆ.<br><br>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ<br>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಲಬುರಗಿ ಜಿಲ್ಲೆಯಲ್ಲಿ ನೋಂದಣಿಯಾಗಿ ಗುರುತಿನ ಚೀಟಿ ವಿತರಿಸಿದ ಅಸಂಘಟಿತ ಕಾರ್ಮಿಕರ ವಿವರ ಈ ಕೆಳಗಿನಂತಿದೆ.<br><br>
<table>
<tr><th>ಕ್ರ.<br>ಸಂ</th><th>ಯೋಜನೆ/ಕಾರ್ಯಕ್ರಮ</th><th>ನೋಂದಾಯಿತ ಫಲಾನುಭವಿಗಳು</th></tr>
<tr><td>01</td><td>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ</td><td>9577</td></tr>
<tr><td>02</td><td>ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ</td><td>41</td></tr>
<tr><td>03</td><td>ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ</td><td>125</td></tr>
<tr><td>04</td><td>ಕೇಂದ್ರ ಸರ್ಕಾರದ ಇ-ಶ್ರಮ್ ಕಾರ್ಯಕ್ರಮ</td><td>4,05,518</td></tr>
</table>
</td></tr>
</table>

| | | |
|---|---|---|
| ಆ) | ಕಳೆದ ಮೂರು ವರ್ಷಗಳಲ್ಲಿ ಬಳಕೆಯಾದ ಕಾರ್ಮಿಕ ಕಲ್ಯಾಣ ನಿಧಿ ಎಷ್ಟು; ಎಷ್ಟು ಕಾರ್ಮಿಕರುಗಳಿಗೆ ಈ ನಿಧಿಯಿಂದ ಎಷ್ಟು ಹಣ ನೀಡಲಾಗಿದೆ; (ಕ್ಷೇತ್ರವಾರು ವಿವರ ನೀಡುವುದು;) | ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ, ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಮಂಡಳಿಗಳಲ್ಲಿ ಕಳೆದ ಮೂರು ವರ್ಷಗಳಿಂದ ಬಳಕೆಯಾದ ಕಾರ್ಮಿಕರ ಕಲ್ಯಾಣ ನಿಧಿಯ ಮೊತ್ತದ ವಿವರ ಈ ಕೆಳಕಂಡಂತಿದೆ. |

**ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**

ಈ ಮಂಡಳಿಯಿಂದ ರಾಜ್ಯದಾದ್ಯಂತ ಕಳೆದ ಮೂರು ವರ್ಷಗಳಲ್ಲಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿತರಣೆಗಾಗಿ ಬಳಕೆಯಾದ ಕಟ್ಟಡ ಕಾರ್ಮಿಕ ಕಲ್ಯಾಣ ನಿಧಿ ಮೊತ್ತ ಹಾಗೂ ಸಹಾಯ ಧನ ಪಡೆದ ಫಲಾನುಭವಿಗಳ ವಿವರಗಳು ಈ ಕೆಳಕಂಡಂತೆ ಇರುತ್ತದೆ.

| ವರ್ಷ | ವಿವಿಧ ಸೌಲಭ್ಯ ಪಡೆದ ಕಾರ್ಮಿಕ ಸಂಖ್ಯೆ | ಮೊತ್ತ (ರೂ.ಕೋಟಿ ಗಳಲ್ಲಿ) |
|---|---|---|
| 2020-21 | 18,77,417 | 1055.10 |
| 2021-22 | 35,21,028 | 1562.39 |
| 2022-23 | 22,97,509 | 2046.93 |
| **ಒಟ್ಟು** | **76,95,954** | **4664.42** |

ಮಂಡಳಿಯು ಸೇವಾ ಸಿಂಧು ತಂತ್ರಾಂಶದಲ್ಲಿ ಈ ಹಿಂದೆ ಸೌಲಭ್ಯಗಳನ್ನು ನೀಡಲಾಗಿದ್ದು. ಸದರಿ ತಂತ್ರಾಂಶದಲ್ಲಿ ಕ್ಷೇತ್ರವಾರು ವಿವರ ನಿರ್ವಹಿಸಿರುವುದಿಲ್ಲ.

**ಕಾರ್ಮಿಕ ಕಲ್ಯಾಣ ಮಂಡಳಿ:**

ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಬಳಕೆಯಾದ ಕಾರ್ಮಿಕ ಕಲ್ಯಾಣ ನಿಧಿಯ ವಿವರ ಹಾಗೂ ಸದರಿ ನಿಧಿಯಿಂದ ಸಂಘಟಿತ ಕಾರ್ಮಿಕರು ಮತ್ತು ಅವರ ಅವಲಂಭಿತರಿಗೆ ಕಲ್ಯಾಣ ಯೋಜನೆಗಳಡಿ ನೀಡಲಾಗಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತೆ ಇರುತ್ತದೆ.

| ವರ್ಷ | ಫಲಾನುಭವಿಗಳ ಸಂಖ್ಯೆ | ವಿವಿಧ ಕಲ್ಯಾಣ ಯೋಜನೆಗಳಡಿ ಫಲಾನುಭವಿಗಳಿಗೆ ಧನ ಸಹಾಯ ನೀಡಿರುವ ಮೊತ್ತ |
|---|---|---|
| 2020-21 | 11 | 61,000 |
| 2021-22 | 10 | 60,000 |
| 2022-23 | 6 | 66,000 |

| | | |
|---|---|---|
| ಇ) | ಕಲಬುರಗಿ ಜಿಲ್ಲೆಯಲ್ಲಿ ಕಾರ್ಮಿಕರ ಕಲ್ಯಾಣ ನಿಧಿಗೆ ಸಂಗ್ರಹವಾದ ಹಣ ಎಷ್ಟು; ಸಂಗ್ರಹವಾಗದಿರಲು ಕಾರಣಗಳೇನು; ಸಂಗ್ರಹವಾದ ಹಣವನ್ನು ಯಾವ ಯಾವ ಮೂಲಗಳಿಗೆ ಬಳಸಲಾಗಿದೆ? (ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಂಡಳಿಗಳಲ್ಲಿ ಕಲಬುರಗಿ ಜಿಲ್ಲೆಯಿಂದ ಕಾರ್ಮಿಕರ ಕಲ್ಯಾಣ ನಿಧಿಗೆ ಸಂಗ್ರಹವಾದ ಹಣದ ವಿವರ ಈ ಕೆಳಕಂಡಂತಿದೆ.<br><br>**ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br><br>ಕಲಬುರಗಿ ಜಿಲ್ಲೆಯಿಂದ ಕಳೆದ ಮೂರು ವರ್ಷಗಳಿಂದ ಮಂಡಳಿಯಲ್ಲಿ ಸಂಗ್ರಹವಾದ ಕಟ್ಟಡ ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತ ರೂ. 17.33 ಕೋಟಿ ಆಗಿರುತ್ತದೆ.<br><br>ಸದರಿ ಮೊತ್ತವನ್ನು ನೊಂದಾಯಿತ ಕಟ್ಟಡ ಕಾರ್ಮಿಕರಿಗೆ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲು ಬಳಸಲಾಗಿದೆ. ವಿವರಗಳನ್ನು **ಅನುಬಂಧ-01** ರಲ್ಲಿ ಒದಗಿಸಲಾಗಿದೆ.<br><br>**ಕಾರ್ಮಿಕ ಕಲ್ಯಾಣ ಮಂಡಳಿ:**<br>ಕಾರ್ಮಿಕ ಕಲ್ಯಾಣ ನಿಧಿಗೆ 2022-23ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆಯ 147 ಸಂಸ್ಥೆಗಳ 14431 ಕಾರ್ಮಿಕರಿಂದ ರೂ. 8,65,860/- ಗಳ ವಂತಿಕೆ ಸಂಗ್ರಹವಾಗಿರುತ್ತದೆ. ಕಾರ್ಮಿಕ ಕಲ್ಯಾಣ ನಿಧಿಗೆ ಸಂಗ್ರಹವಾದ ಹಣವನ್ನು ಸಂಘಟಿತ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಈ ಕೆಳಕಂಡ ಕಲ್ಯಾಣ ಯೋಜನೆಗಳ ಸೌಲಭ್ಯಕ್ಕೆ ಬಳಸಲಾಗುವುದು.<br><br>1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ<br>4) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ ಸಂಸ್ಥೆಗಳಿಗೆ ಧನಸಹಾಯ<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ<br><br>ಕಳೆದ ಮೂರು ವರ್ಷಗಳಲ್ಲಿ ಕಾರ್ಮಿಕ ಕಲ್ಯಾಣ ನಿಧಿಗೆ ಸಂಗ್ರಹವಾದ ವಂತಿಕೆ ಮೊತ್ತವನ್ನು ವೆಚ್ಚ ಮಾಡಿರುವ ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. |

**ಕಾಇ 126 ಎಲ್ಇಟಿ 2024**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**